ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ______________

ಪತ್ರಿಕೆಯ ಹೆಸರು : NAME OF THE NEWS PAPER: ______________ ದಿನಾಂಕ : DATE : 7/7/2020

# ವಿಧಾನಸೌಧ ಭದ್ರತಾ ವಿಭಾಗದ ಎಎಸ್ಐ ಬಲಿ

7/7/20

**ಬೆಂಗಳೂರು:** ಕೊರೊನಾ ಸೋಂಕು ತಗುಲಿದ್ದ ವಿಧಾನಸೌಧ ಭದ್ರತಾ ವಿಭಾಗದ ಎಎಸ್ಐವೊಬ್ಬರು ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಮೃತಪಟ್ಟಿದ್ದಾರೆ.

58 ವರ್ಷದ ಎಎಸ್ಐ ಮೃತರು. ನಗರ ಪೊಲೀಸ್ ಆಯುಕ್ತರ ಸೂಚನೆ ಮೇರೆಗೆ 50 ವರ್ಷ ಮೇಲ್ಪಟ್ಟ ಸಿಬ್ಬಂದಿಗೆ ರಜೆ ಮೇಲೆ ಕಳುಹಿಸಲಾಗಿತ್ತು. ರಜೆಯಲ್ಲಿದ್ದ ಎಎಸ್ಐಗೆ ಶೀತ, ಜ್ವರ, ಹಾಗೂ ಉಸಿರಾಟದ ತೊಂದರೆ ಕಾಣಿಸಿಕೊಂಡಿದೆ. ಹೀಗಾಗಿ ಕೊರೊನಾ ಪರೀಕ್ಷೆ ನಡೆಸಿದಾಗ ಪಾಸಿಟಿವ್ ಎಂಬುದು ಗೊತ್ತಾಗಿದೆ. ಹೊಸಕೋಟೆ ಸಮೀಪದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಸೋಮವಾರ ಬೆಳಗ್ಗೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದರು.

**ಐವರಿಗೆ ಸೋಂಕು, ಐದು ಠಾಣೆ ಸೀಲ್:** ನಗರದ ಮತ್ತೆ ಐವರು ಪೊಲೀಸ್ ಸಿಬ್ಬಂದಿಗೆ ಸೋಂಕು ಕಾಣಿಸಿಕೊಂಡಿದ್ದು, ಐದು ಠಾಣೆಗಳನ್ನು ಸೀಲ್‌ಡೌನ್ ಮಾಡಲಾಗಿದೆ. ಜೆ.ಜೆ. ನಗರ, ಆರ್.ಟಿ. ನಗರ, ಜೀವನ್ ಭೀಮಾನಗರ, ಹನುಮಂತನಗರ ಮತ್ತು ಹಲಸೂರು ಗೇಟ್ ಸಂಚಾರ ಠಾಣೆ ಸೀಲ್‌ಡೌನ್ ಮಾಡಲಾಗಿದೆ.

ಜೆ.ಜೆ. ನಗರ ಠಾಣೆಯ ಮಹಿಳಾ ಪಿಎಸ್ಐ ಹಾಗೂ ಆರ್.ಟಿ. ನಗರ, ಜೀವನ್ ಭೀಮಾನಗರ, ಹನುಮಂತನಗರ ಮತ್ತು ಹಲಸೂರು ಗೇಟ್ ಸಂಚಾರ ಠಾಣೆಯ ಐವರು ಕಾನ್‌ಸ್ಟೇಬಲ್‌ಗಳಿಗೆ ಸೋಂಕು ತಗುಲಿರುವುದು ದೃಢಪಟ್ಟಿದೆ. ಎಲ್ಲರೂ ನಿಗದಿತ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಪ್ರಾಥಮಿಕ ಸಂಪರ್ಕದಲ್ಲಿದ್ದ ಸುಮಾರು 70 ಮಂದಿಯನ್ನು ಕ್ವಾರಂಟೈನ್ ಮಾಡಲಾಗಿದೆ. ನಗರದಲ್ಲಿ ಇದುವರೆಗೂ 260 ಮಂದಿ ಪೊಲೀಸರಿಗೆ ಸೋಂಕು ತಗುಲಿದ್ದು, 75 ಮಂದಿ ಗುಣಮುಖರಾಗಿದ್ದಾರೆ. ಇನ್ನುಳಿದವರಿಗೆ ಚಿಕಿತ್ಸೆ ಮುಂದುವರಿದಿದೆ.